**ದಿನಾಂಕ:06.03.2025ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಬಾಲ್ಯವಿವಾಹಗಳನ್ನು ತಡೆಯುವ ರಾಜ್ಯಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆಯ ನಡವಳಿ**

ಸಭೆಗೆ ಹಾಜರಾದವರ ವಿವರ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು,
2. ಹೆಚ್ಚುವರಿ ಪೋಲೀಸ್ ಮಹಾನಿರ್ದೇಶಕರು(ಸಾಮಾನ್ಯ), ಒಳಾಡಳಿತ ಇಲಾಖೆ.
3. ಅಧ್ಯಕ್ಷರು, ಕರ್ನಾಟಕ ಮಕ್ಕಳ ರಕ್ಷಣಾ ಆಯೋಗ.
4. ನಿರ್ದೇಶಕರು ಮಕ್ಕಳ ರಕ್ಷಣಾ ನಿರ್ದೇಶನಾಲಯ
5. ಜಂಟಿ ಕಾರ್ಯದರ್ಶಿಗಳು, ಗೃಹ ಇಲಾಖೆ.
6. ಜಂಟಿ ಕಾರ್ಯದರ್ಶಿಗಳು ಕಾರ್ಮಿಕ ಆಯುಕ್ತರು, ಕಾರ್ಮಿಕ ಇಲಾಖೆ.
7. ಹೆಚ್ಚುವರಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
8. ಜಂಟಿ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ.
9. ಉಪ ನಿರ್ದೇಶಕರು(ಪ್ರೌಢ) ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ.
10. ಕಾರ್ಯಕ್ರಮಾಧಿಕಾರಿ, ಸಮಗ್ರ ಶಿಕ್ಷಣ ಕರ್ನಾಟಕ.
11. ಶಾಖಾಧಿಕಾರಿ, ಕಂದಾಯ ಸಚಿವಾಲಯ(ಸಮನ್ವಯ).
12. ಪ್ರತಿನಿಧಿ, ಸ್ವಾಮಿ ವಿವೇಕಾನಂದ ಯ್ಯೂತ್ ಮೂಮೆಂಟ್.

**ಸಭೆಯಲ್ಲಿ ಚರ್ಚಿಸಲಾದ ವಿಷಯ ಮತ್ತು ನಡವಳಿಗಳು :**

ರಾಜ್ಯ ಸರ್ಕಾರದ ಆದೇಶ ಸಂಖ್ಯೆ ಮಮಇ 105 ಮಮಅ 2013, ಬೆಂಗಳೂರು, ದಿನಾಂಕ 22.01.2014ರನ್ವಯ ಬಾಲ್ಯ ವಿವಾಹಗಳನ್ನು ತಡೆಯುವಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಇವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿಯನ್ನು ರಚಿಸಲಾಗಿದ್ದು, ಪ್ರತಿ 6 ತಿಂಗಳಿಗೊಮ್ಮೆ ಸಮಿತಿಯು ಸಭೆ ಸೇರಿ ರಾಜ್ಯದಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟುವ ಕಾರ್ಯ ಸಮರ್ಪಕವಾಗಿ ನಡೆಯುತ್ತಿರುವ ಬಗ್ಗೆ ಪರಿಶೀಲನೆ ನಡೆಸಬೇಕಾಗಿರುತ್ತದೆ. ಅದರಂತೆ ಈ ದಿನ ಸಭೆ ನಡೆಸಲಾಗಿದ್ದು, ಸಭೆಯ ನಡವಳಿ ಈ ಕೆಳಗಿನಂತಿರುತ್ತದೆ:

**1. ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ 2016ಕ್ಕೆ ಸಂಬಂಧಿಸಿದಂತೆ ನಿಯಮಗಳನ್ನು ರಚಿಸುವ ಬಗ್ಗೆ ಚರ್ಚಿಸಲಾಯಿತು.**

ಅಧ್ಯಕ್ಷರು ಮಾತನಾಡಿ ತಿದ್ದುಪಡಿ ಕಾಯ್ದೆಯ ಅನುಷ್ಠಾನಕ್ಕೆ ನಿಯಮದ ಕರಡನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಸಿದ್ಧಪಡಿಸಿರುತ್ತದೆ. ಪ್ರಸ್ತುತ ಬಾಲ್ಯ ವಿವಾಹ ನಿಷೇಧ ಮತ್ತು ಮೇಲ್ವಿಚಾರಣಾ ಕೋಶವು ಮಕ್ಕಳ ರಕ್ಷಣಾ ನಿರ್ದೇಶನಾಲಯಕ್ಕೆ ವರ್ಗಾವಣೆಗೊಂಡಿರುವುದರಿಂದ, ಕರಡನ್ನು ಪರಿಶೀಲಿಸಿ ಏಪ್ರಿಲ್ 15 ರೊಳಗೆ ಕರಡನ್ನು ಅಂತಿಮಗೊಳಿಸುವುದು ಮತ್ತು ಅಧಿಸೂಚನೆ

ಹೊರಡಿಸಲು ಕ್ರಮವಹಿಸುವುದು ಎಂದು ಸೂಚಿಸಿದರು. (**ಕ್ರಮ**: ಮಕ್ಕಳ ರಕ್ಷಣಾ ನಿರ್ದೇಶನಾಲಯ).

2. **ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಪ್ರಕರಣ ಸಂಖ್ಯೆ WP (C) No.1234 of 2017 ರಲ್ಲಿನ ತನ್ನ ನಿರ್ದೇಶನದಲ್ಲಿ ರಾಜ್ಯ ಸರ್ಕಾರಗಳು ಜಿಲ್ಲಾ ಮಟ್ಟದಲ್ಲಿ ಬಾಲ್ಯವಿವಾಹ ನಿಷೇಧಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುವುದಕ್ಕಾಗಿಯೇ ಪ್ರತ್ಯೇಕ ಅಧಿಕಾರಿಯನ್ನು ನೇಮಕಾತಿ ಮಾಡಲು ನಿರ್ದೇಶಿಸಿರುತ್ತದೆ ಮತ್ತು ಅವರಿಗೆ ಬೇರೆ ಕಾರ್ಯಬಾರವನ್ನು ವಹಿಸದೆ ಬಾಲ್ಯವಿವಾಹ ತಡೆಗಟ್ಟುವ ಕರ್ತವ್ಯವನ್ನು ಮಾತ್ರ ನಿರ್ವಹಿಸಲು ನಿರ್ದೇಶಿಸಿರುತ್ತದೆ.**

ಈ ಕುರಿತಂತೆ ಸಭೆಗೆ ರಾಜ್ಯದಲ್ಲಿ ಈಗಾಗಲೇ ಗ್ರಾಮ, ಗ್ರಾಮ ಪಂಚಾಯತ್, ಹೋಬಳಿ, ತಾಲ್ಲೂಕು, ಜಿಲ್ಲೆ ಮತ್ತು ರಾಜ್ಯಮಟ್ಟದಲ್ಲಿ ವಿವಿಧ ಇಲಾಖೆಗಳ ಅಧಿಕಾರಿ ಸಿಬ್ಬಂದಿಗಳನ್ನು ಬಾಲ್ಯವಿವಾಹ ನಿಷೇಧಾಧಿಕಾರಿಗಳಾಗಿ ನೇಮಿಸಿ ಆಧಿಸೂಚಿಸಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು. ಸದರಿ ಅಧಿಕಾರಿಗಳು ತಮ್ಮ ಇಲಾಖೆಯ ಕರ್ತವ್ಯದೊಂದಿಗೆ ಬಾಲ್ಯವಿವಾಹ ನಿಷೇಧಾಧಿಕಾರಿಗಳ ಕರ್ತವ್ಯವನ್ನೂ ನಿರ್ವಹಿಸಬೇಕಾಗಿರುತ್ತದೆ ಹಾಗೂ ಇದಕ್ಕಾಗಿಯೇ ಪ್ರತ್ಯೇಕ ಅಧಿಕಾರಿಗಳು ನೇಮಕವಾಗಿರುವುದಿಲ್ಲ ಎನ್ನುವುದನ್ನು ತಿಳಿಸಲಾಗಿ ಬಾಲ್ಯವಿವಾಹಗಳ ಸಂಖ್ಯೆ ಪ್ರತ್ಯೇಕ ಅಧಿಕಾರಿಗಳನ್ನು ನೇಮಿಸಿ ನಿರ್ವಹಿಸುವಷ್ಟು ಸಂಖ್ಯೆಯಲ್ಲಿ ಇಲ್ಲದೇ ಇರುವುದರಿಂದ ಪ್ರತ್ಯೇಕ ಅಧಿಕಾರಿಗಳ ನೇಮಕ ಆಗಿರುವುದಿಲ್ಲ. ಆದಾಗ್ಯೂ ಎಲ್ಲಾ ಬಾಲ್ಯವಿವಾಹ ನಿಷೇಧಾಧಿಕಾರಿಗಳು ತಮ್ಮ ಇಲಾಖಾ ಕರ್ತವ್ಯದ ಜೊತೆಗೆ ಬಾಲ್ಯವಿವಾಹಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲೂ ಸಹ ಪ್ರಾಮುಖ್ಯತೆ ನೀಡಬೇಕು ಎಂದು ಸಭೆಯಲ್ಲಿ ತಿಳಿಸಲಾಯಿತು.

3. **ಬಾಲ್ಯ ವಿವಾಹ ತಡೆಗಟ್ಟುವಲ್ಲಿ ಸಂಪನ್ಮೂಲಗಳ ಕುರಿತು:**

ಕಳೆದ 5 ವರ್ಷಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಾಲ್ಯವಿವಾಹಗಳು ನಡೆದಿರುವ ಮಂಡ್ಯ, ಶಿವಮೊಗ್ಗ, ಮೈಸೂರು, ಚಿತ್ರದುರ್ಗ, ಕೋಲಾರ, ಬಾಗಲಕೋಟೆ ಜಿಲ್ಲೆಗಳ ಜಿಲ್ಲಾಮಟ್ಟದ ಬಾಲ್ಯವಿವಾಹ ನಿಷೇಧಾಧಿಕಾರಿಗಳೊಂದಿಗೆ ಆನ್ಲೈನ್ ಸಮಾಲೋಚನೆ ಕೈಗೊಂಡು ಬಾಲ್ಯವಿವಾಹಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಬಾಲ್ಯ ವಿವಾಹಗಳ ಕಾರಣಗಳು ಮತ್ತು ಸಂಪನ್ಮೂಲಗಳ ಲಭ್ಯತೆ ಕುರಿತು ಮಾಹಿತಿ ಪಡೆಯಲು ಸೂಚಿಸಲಾಯಿತು. (**ಕ್ರಮ**: ಮಕ್ಕಳ ರಕ್ಷಣಾ ನಿರ್ದೇಶನಾಲಯ).

4. **ಬಾಲ್ಯ ವಿವಾಹ ಪ್ರಕರಣಗಳ ಪರಿಶೀಲನೆ, ತಂತ್ರಾಂಶ ಬಳಕೆ ಕುರಿತು:**

ಬಾಲ್ಯವಿವಾಹ ತಡೆಗಟ್ಟಲು ವೈಯಕ್ತಿಕ ಉತ್ತರದಾಯಿತ್ವ ಮತ್ತು ತುರ್ತು ಕ್ರಮಗಳನ್ನು ವಹಿಸಿರುವ ಕುರಿತು ಹಾಗೂ ತ್ರೈಮಾಸಿಕ ವರದಿಗಳನ್ನು ಸರ್ಕಾರದ ಅಧಿಕೃತ ಜಾಲತಾಣದಲ್ಲಿ

ಅಳವಡಿಸಲು ನಿರ್ದೇಶನವಿರುವ ಕುರಿತು ಚರ್ಚಿಸಲಾಯಿತು. ಈ ಕುರಿತಂತೆ ಈಗಾಗಲೇ ಮಕ್ಕಳ ರಕ್ಷಣಾ ನಿರ್ದೇಶನಾಲಯವು C-DAC ಸಂಸ್ಥೆಯ ಸಹಯೋಗದೊಂದಿಗೆ "NextGen Surakshini" ಎಂಬ ವೆಬ್ ಪೋರ್ಟಲ್ ಮತ್ತು ಮೊಬೈಲ್ ಆಪ್ ಅನ್ನು ಅಭಿವೃದ್ಧಿ ಪಡಿಸುತ್ತಿರುವ ಮತ್ತು ಸದರಿ ತಂತ್ರಾಂಶದಲ್ಲಿ ಎಲ್ಲಾ ಹಂತಗಳ ಪ್ರತಿಯೊಬ್ಬ CMPOಗಳಿಗೂ Login id ನೀಡಲಾಗುತ್ತಿರುವ ಕುರಿತು ಸಭೆಯ ಗಮನಕ್ಕೆ ತರಲಾಯಿತು. ಅಧ್ಯಕ್ಷರು ಮಕ್ಕಳ ಕಲ್ಯಾಣ ಸಮಿತಿಗಳಿಗೂ ಸಹ ತಂತ್ರಾಂಶದಲ್ಲಿ log in credentials ಒದಗಿಸಲು ಸೂಚಿಸಿದರು. ಮುಂದುವರೆದು, ರಾಜ್ಯ, ಜಿಲ್ಲೆ, ತಾಲೂಕು ಹಾಗೂ ಗ್ರಾಮ ಪಂಚಾಯತ್ ಮಟ್ಟದ ಎಲ್ಲಾ ಹಂತಗಳ ಪರಿಶೀಲನಾ ಸಭೆಗಳ ನಡವಳಿಗಳನ್ನು ಪೋರ್ಟಲ್ ನಲ್ಲಿ ಅಳವಡಿಸಲು ಅವಕಾಶ ಕಲ್ಪಿಸುವಂತೆ ಸೂಚಿಸಿದರು. (ಕ್ರಮ : ಮಕ್ಕಳ ರಕ್ಷಣಾ ನಿರ್ದೇಶನಾಲಯ).

5. **ಬಾಲ್ಯವಿವಾಹ ನಿಷೇಧಾಧಿಕಾರಿಗಳ ಕಾರ್ಯನಿರ್ವಹಣೆ ಕುರಿತು ತ್ರೈಮಾಸಿಕ ಪರಿಶೀಲನೆಯನ್ನು ನಡೆಸುವ ಕುರಿತು.**

ಪ್ರಸ್ತುತ ಬಾಲ್ಯವಿವಾಹ ನಿಷೇಧಾಧಿಕಾರಿಗಳ ಕಾರ್ಯನಿರ್ವಹಣೆ ಕುರಿತು ಪ್ರತ್ಯೇಕವಾದ ಪರಿಶೀಲನಾ ವ್ಯವಸ್ಥೆ ಇಲ್ಲದಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು. ಜಿಲ್ಲಾ ಹಂತದಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ CMPOಗಳ ಕಾರ್ಯನಿರ್ವಹಣೆಯ ತ್ರೈಮಾಸಿಕ ಪರಿಶೀಲನೆಯನ್ನು ನಡೆಸುವಂತೆ ಕ್ರಮವಹಿಸಲು ತಿಳಿಸಲಾಯಿತು. (**ಕ್ರಮ**: ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಮಕ್ಕಳ ರಕ್ಷಣಾ ನಿರ್ದೇಶನಾಲಯ)

6. **ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ನಿಯಮಿತವಾಗಿ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡುವ ಕುರಿತು.**

ಬಾಲ್ಯವಿವಾಹ ನಿಷೇಧಾಧಿಕಾರಿಗಳಾಗಿರುವ ವಿವಿಧ ಭಾಗೀದಾರ ಇಲಾಖೆಗಳ ಎಲ್ಲಾ ಹಂತದ ಅಧಿಕಾರಿ/ಸಿಬ್ಬಂದಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಲು KHPT ಸಂಸ್ಥೆಯ ಸಹಯೋಗದೊಂದಿಗೆ ಕ್ರಮವಹಿಸಲಾಗುತ್ತಿರುವ ಕುರಿತು ಸಭೆಯ ಗಮನಕ್ಕೆ ತರಲಾಯಿತು. ಬಾಲ್ಯವಿವಾಹ ನಿಷೇಧಾಧಿಕಾರಿಗಳಾಗಿರುವ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟ, ತಾಲ್ಲೂಕು ಮಟ್ಟ, ಗ್ರಾಮ ಪಂಚಾಯತ್ ಮಟ್ಟದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಿ ಇವರ ಮೂಲಕ ಕ್ಷೇತ್ರಮಟ್ಟದಲ್ಲಿ ಮಕ್ಕಳು ಮತ್ತು ಸಮುದಾಯದೊಂದಿಗೆ ಕೆಲಸ ನಿರ್ವಹಿಸುವ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಗ್ರಾಮ ಪಂಚಾಯ್ತಿಗಳು, ಇತ್ಯಾದಿ ಎಲ್ಲಾ ಭಾಗೀದಾರರಿಗೂ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಿ ಇವರೆಲ್ಲರ ಮೂಲಕ ಹದಿಹರೆಯದ ಮಕ್ಕಳು ಹಾಗೂ ಅವರ ಪೋಷಕರುಗಳಿಗೆ ಜಾಗೃತಿ ಹಾಗೂ ಅರಿವನ್ನು ಮೂಡಿಸುವುದು ಸದರಿ ತರಬೇತಿಯ

ಚೌಕಟ್ಟಿನಲ್ಲಿ ಒಳಗೊಂಡಿರುತ್ತದೆಂದು ಹಾಗೂ ವಾರ್ಷಿಕ ಕ್ರಿಯಾಯೋಜನೆಯನ್ನು ರೂಪಿಸಿರುವುದಾಗಿ ಸಭೆಯ ಗಮನಕ್ಕೆ ತರಲಾಯಿತು.

ಅಲ್ಲದೇ ಮಕ್ಕಳ ರಕ್ಷಣಾ ನಿರ್ದೇಶನಾಲಯದ ವತಿಯಿಂದ ಎಲ್ಲಾ ಮಕ್ಕಳ ರಕ್ಷಣಾ ಭಾಗೀದಾರರಿಗೆ ಮತ್ತು KSCPCR ಸಹಯೋಗದೊಂದಿಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಶಾಲಾ, ಕಾಲೇಜು ವಿದ್ಯಾರ್ಥಿಗಳು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಶಿಕ್ಷಕರು, ಎಲ್ಲಾ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ವ್ಯಾಪಕವಾಗಿ ಅರಿವು ಕಾರ್ಯಕ್ರಮ ಮತ್ತು ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇದಲ್ಲದೇ "ವಾತ್ಸಲ್ಯ ವಾಣಿ" ಎಂಬ ಆಕಾಶವಾಣಿ ಸರಣಿ ಕಾರ್ಯಕ್ರಮದ ಮೂಲಕ ಅರಿವು ಮೂಡಿಸಿರುವ ಕುರಿತು ಸಭೆಯ ಗಮನಕ್ಕೆ ತರಲಾಯಿತು. (**ಕ್ರಮ**: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಮಕ್ಕಳ ರಕ್ಷಣಾ ನಿರ್ದೇಶನಾಲಯ)

7. **ಬಾಲ್ಯವಿವಾಹ ನಿಷೇಧದಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಗುರುತರ ಜವಾಬ್ದಾರಿ ಕುರಿತು.**

ಸಾಮೂಹಿಕ ವಿವಾಹಗಳಲ್ಲಿ ವಧು-ವರರ ವಯಸ್ಸನ್ನು ದೃಢಪಡಿಸಿಕೊಳ್ಳುವ ಮೂಲಕ ಬಾಲ್ಯವಿವಾಹಗಳು ನಡೆಯದಿರುವ ಕುರಿತು ಖಾತ್ರಿಪಡಿಸಿಕೊಳ್ಳುವುದು ಜಿಲ್ಲಾಡಳಿತದ ಜವಾಬ್ದಾರಿಯಾಗಿರುತ್ತದೆ ಹಾಗೂ ಬಾಲ್ಯವಿವಾಹಕ್ಕೆ ಕಾರಣರಾದ ವ್ಯಕ್ತಿಗಳು ಮತ್ತು ಭಾಗವಹಿಸಿದವರ ಮೇಲೂ ಸಹ ಕಾನೂನು ಕ್ರಮ ಜರುಗಿಸುವುದು ಜಿಲ್ಲಾಡಳಿತದ ಗುರುತರ ಜವಾಬ್ದಾರಿಯಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಲಾಯಿತು. (**ಕ್ರಮ**: ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು)

8. **ವಿಶೇಷ ಪೊಲೀಸ್ ಘಟಕ ಸ್ಥಾಪಿಸುವ ಕುರಿತು**

ರಾಜ್ಯದಲ್ಲಿ ಈಗಾಗಲೇ ಮಕ್ಕಳ ವಿಶೇಷ ಪೊಲೀಸ್ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು ಈಗಾಗಲೇ ಈ ಘಟಕಗಳು ಬಾಲ್ಯವಿವಾಹ ತಡೆಗಟ್ಟುವಲ್ಲಿ ಕಾರ್ಯನಿರ್ವಹಿಸುತ್ತಿರುವ ಕುರಿತು ಒಳಾಡಳಿತ ಇಲಾಖೆಯ Additional IG (General) ರವರು ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಸಂಬಂಧಿಸಿದಂತೆ ವಿಶೇಷ ಮಕ್ಕಳ ಪೊಲೀಸ್ ಘಟಕಗಳು ಬಾಲ್ಯವಿವಾಹಗಳನ್ನು ತಡೆಗಟ್ಟುವಲ್ಲಿ ವಿಶೇಷ ಪೊಲೀಸ್ ಘಟಕಗಳಾಗಿಯೂ ಕಾರ್ಯನಿರ್ವಹಿಸುವಂತೆ ಅಧಿಸೂಚನೆ ಹೊರಡಿಸಲು ಸೂಚಿಸಲಾಯಿತು. SJPUಗಳು ದ್ವೈವಾರ್ಷಿಕ ವರದಿಯನ್ನು ಸಲ್ಲಿಸಲು ಅನುಕೂಲವಾಗುವಂತೆ ವರದಿ ನಮೂನೆಯನ್ನು ಸಿದ್ಧಪಡಿಸಿ ನೀಡಲು ಸೂಚಿಸಲಾಯಿತು. (**ಕ್ರಮ**: ಒಳಾಡಳಿತ ಇಲಾಖೆ, ಮಕ್ಕಳ ರಕ್ಷಣಾ ನಿರ್ದೇಶನಾಲಯ)

9. **ವಿಶೇಷ ಬಾಲ್ಯವಿವಾಹ ನಿಷೇಧ ಘಟಕಗಳನ್ನು ಸ್ಥಾಪಿಸುವ ಕುರಿತು.**

ರಾಜ್ಯಮಟ್ಟದಲ್ಲಿ ಈಗಾಗಲೇ ಬಾಲ್ಯವಿವಾಹ ನಿಷೇಧ ಉಸ್ತುವಾರಿ ಕೋಶ ಸ್ಥಾಪನೆಯಾಗಿ ಕಾರ್ಯನಿರ್ವಹಿಸುತ್ತಿರುವ ಕುರಿತು ಸಭೆಗೆ ಮಾಹಿತಿ ನೀಡಲಾಯಿತು. ಸದರಿ ಬಾಲ್ಯವಿವಾಹ ನಿಷೇಧ ಉಸ್ತುವಾರಿ ಕೋಶವು 5 ಜನ ಸಾಮಾಜಿಕ ಕಾರ್ಯಕರ್ತರನ್ನು ಒಳಗೊಂಡಿರಬೇಕಾಗಿರುವ ಕುರಿತು ಚರ್ಚಿಸಲಾಗಿ ಗೌರವಧನ ಆಧಾರದ ಮೇಲೆ ಅಗತ್ಯ ಅನುಸಾರ ಹಾಗೂ ಪ್ರಕರಣ ಅನುಸಾರ ಸಾಮಾಜಿಕ ಕಾರ್ಯಕರ್ತರನ್ನು ನೇಮಿಸಿಕೊಳ್ಳಲು ಸೂಚಿಸಲಾಯಿತು. ಜಿಲ್ಲಾ ಮಟ್ಟದಲ್ಲಿ ವಿಶೇಷ ಬಾಲ್ಯವಿವಾಹ ನಿಷೇಧ ಘಟಕಗಳು ಸ್ಥಾಪನೆಯಾಗಿಲ್ಲದಿರುವ ಕುರಿತು ಸಭೆಯ ಗಮನಕ್ಕೆ ತರಲಾಯಿತು. (**ಕ್ರಮ**: ಮಕ್ಕಳ ರಕ್ಷಣಾ ನಿರ್ದೇಶನಾಲಯ)

10. **ನ್ಯಾಯಿಕ ದಂಡಾಧಿಕಾರಿಗಳು ಬಾಲ್ಯವಿವಾಹಗಳನ್ನು ನಿಲ್ಲಿಸಲು ಸ್ವಯಂ ಪ್ರೇರಿತರಾಗಿ ತಡೆಯಾಜ್ಞೆ ನೀಡುವ ಕುರಿತು.**

ಎಲ್ಲಾ ಪ್ರಥಮ ದರ್ಜೆ ನ್ಯಾಯಾಲಯ/ಮೆಟ್ರೋಪಾಲಿಟನ್ ನ್ಯಾಯಾಲಯ ದಂಡಾಧಿಕಾರಿಗಳು ಯಾವುದಾದರೂ ವರದಿ ಅಥವಾ ಮಾಹಿತಿಯ ಆಧಾರದ ಮೇಲೆ ಸ್ವಯಂ ಪ್ರೇರಿತವಾಗಿ ದೂರನ್ನು ದಾಖಲಿಸಿಕೊಂಡು, ಬಾಲ್ಯವಿವಾಹಗಳನ್ನು ನಿಲ್ಲಿಸಲು/ಸಾಮೂಹಿಕ ವಿವಾಹಗಳಲ್ಲಿ ನಡೆಯಬಹುದಾದ ಬಾಲ್ಯವಿವಾಹಗಳನ್ನು ನಿಲ್ಲಿಸಲು ಬಾಲ್ಯವಿವಾಹ ನಿಷೇಧ ಕಾಯ್ದೆ 2006, ಸೆಕ್ಷನ್ 13ರಡಿ ಪ್ರದತ್ತವಾದ ಅಧಿಕಾರ ಉಪಯೋಗಿಸಿ ಪೂರ್ವಭಾವಿಯಾಗಿ ತಡೆಯಾಜ್ಞೆ ನೀಡಲು ಅವಕಾಶವಿರುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. (**ಕ್ರಮ**: ಕಾನೂನು ಮತ್ತು ನ್ಯಾಯಾಂಗ ಇಲಾಖೆ)

11. **ಬಾಲ್ಯವಿವಾಹಗಳ ಪ್ರಕರಣಗಳಿಗೆ ಸಂಬಂಧಿಸಿದಂತೆ Special Fast-Track Courtಗಳನ್ನು ಸ್ಥಾಪಿಸುವ ಕುರಿತು.**

ಈ ಕುರಿತಂತೆ ಈಗಾಗಲೇ ಇರುವ ವಿಶೇಷ ಪೋಕ್ಸೋ ನ್ಯಾಯಾಲಯಗಳನ್ನೇ ಬಾಲ್ಯವಿವಾಹ Special Fast-Track Courtಗಳನ್ನಾಗಿ ಅಧಿಸೂಚಿಸುವ ಕುರಿತು ಕಾನೂನು ಮತ್ತು ನ್ಯಾಯಾಂಗ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು ಸಭೆಯಲ್ಲಿ ಸೂಚಿಸಲಾಯಿತು. (**ಕ್ರಮ**: ಮಕ್ಕಳ ರಕ್ಷಣಾ ನಿರ್ದೇಶನಾಲಯ)

12. **ಬಾಲ್ಯವಿವಾಹ ಪ್ರಕರಣಗಳಲ್ಲಿ ನಿರ್ಲಕ್ಷ್ಯ ತೋರುವ ಸಾರ್ವಜನಿಕ ಸೇವಕರ ವಿರುದ್ಧ ಕಡ್ಡಾಯ ಕ್ರಮ ಜರುಗಿಸುವ ಕುರಿತು.**

ಯಾವುದೇ ಸಾರ್ವಜನಿಕ ಸೇವಕರು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬಾಲ್ಯವಿವಾಹಗಳನ್ನು ತಡೆಯಲು ನಿರ್ಲಕ್ಷ್ಯ ತೋರಿದಲ್ಲಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ, 2023ರ ಸೆಕ್ಷನ್ 199(C) ಪ್ರಕರಣಗಳ ಪ್ರಕಾರ ಕಡ್ಡಾಯ ಕ್ರಮ ಜರುಗಿಸಲು ಅವಕಾಶವಿದೆ ಎಂಬುದನ್ನು ಸಭೆಯ ಗಮನಕ್ಕೆ ತರಲಾಯಿತು. (**ಕ್ರಮ**: ಎಲ್ಲಾ ಸಾರ್ವಜನಿಕ ಇಲಾಖೆಗಳು)

## 13.ಸಮುದಾಯದ ಒಳಗೊಳ್ಳುವಿಕೆ

ಸಿ.ಎಂ.ಪಿ.ಓ, ಗ್ರಾಮ ಪಂಚಾಯತ್, ಮುನಿಸಿಪಾಲಿಟಿ, ಸರ್ಕಾರಿ ಅಧಿಕಾರಿಗಳು, ಶಾಲೆಗಳ ಪ್ರಾಂಶುಪಾಲರುಗಳು ಮತ್ತು ಶಿಕ್ಷಕರು, ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳು, ಸ್ಥಳೀಯ ಜನ ಪ್ರತಿನಿಧಿಗಳು ಹಾಗೂ ಪ್ಯಾರಾ ಲೀಗಲ್ ಸ್ವಯಂ ಸೇವಕರು (PLVs)ಗಳನ್ನು ಒಳಗೊಂಡಂತೆ ವಾರ್ಷಿಕ ಕ್ರಿಯಾಯೋಜನೆ ತಯಾರಿಸಿ ಎಲ್ಲಾ ಭಾಗೀದಾರರಿಗೆ ಸಮುದಾಯ ಕೇಂದ್ರಿತ ಸಾಮರ್ಥ್ಯಾಭಿವೃದ್ಧಿ ತರಬೇತಿ ಕೈಗೊಳ್ಳುವ ಕುರಿತು ತಿಳಿಸಲಾಯಿತು. (**ಕ್ರಮ**: ಮಕ್ಕಳ ರಕ್ಷಣಾ ನಿರ್ದೇಶನಾಲಯ)

## 14. ಗ್ರಾಮಗಳನ್ನು "ಬಾಲ್ಯವಿವಾಹ ಮುಕ್ತ ಗ್ರಾಮ"ಗಳನ್ನಾಗಿ ಮಾಡಲು ಕ್ರಮವಹಿಸುವ ಕುರಿತು.

ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ "ಬಯಲು ಬಹಿರ್ದೆಸೆ ಮುಕ್ತ ಗ್ರಾಮ"ಗಳನ್ನಾಗಿ ಮಾಡಿದ ಮಾದರಿಯಲ್ಲಿ "ಬಾಲ್ಯವಿವಾಹ ಮುಕ್ತ ಗ್ರಾಮ"ಗಳನ್ನಾಗಿ ಮಾಡಲು ನಿರ್ದೇಶನವಿರುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಮಕ್ಕಳ ರಕ್ಷಣಾ ನಿರ್ದೇಶನಾಲಯದ ವತಿಯಿಂದ ಬಾಲ್ಯವಿವಾಹ ಮುಕ್ತ ಗ್ರಾಮಗಳನ್ನು ಗುರುತಿಸಿ ಪ್ರಶಸ್ತಿ ನೀಡುವ ಕುರಿತು ಈಗಾಗಲೇ ಕ್ರಮವಹಿಸಲಾಗಿರುವ ಕುರಿತು ಸಭೆಯ ಗಮನಕ್ಕೆ ತರಲಾಯಿತು. (**ಕ್ರಮ**: ಮಕ್ಕಳ ರಕ್ಷಣಾ ನಿರ್ದೇಶನಾಲಯ)

## 15. ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಕುರಿತು.

ಸಿ.ಎಂ.ಪಿ.ಓಗಳ ನೇತೃತ್ವದಲ್ಲಿ ಶಾಲೆ, ಧಾರ್ಮಿಕ ಸ್ಥಳಗಳು ಮತ್ತು ಗ್ರಾಮ ಪಂಚಾಯತ್‌ಗಳಲ್ಲಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಮತ್ತು ಶಾಲೆ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಪ್ರತಿ ತಿಂಗಳು ಮಾಹಿತಿ ಕಾರ್ಯಗಾರಗಳನ್ನು ಹಮ್ಮಿಕೊಂಡು ಬಾಲ್ಯವಿವಾಹ ತಡೆಯಲು ಕ್ರಮವಹಿಸುವ ಕುರಿತು ಚರ್ಚಿಸಲಾಯಿತು. (**ಕ್ರಮ**: CMPOs, ಮಕ್ಕಳ ನಿರ್ದೇಶನಾಲಯ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ)

## 16. ಲೈಂಗಿಕತೆ ಮತ್ತು ಹಕ್ಕುಗಳ ಶಿಕ್ಷಣ ಕುರಿತು.

World Health Organization ಸೂಚಿಸಿರುವ ಚೌಕಟ್ಟಿನಂತೆ ಶಾಲಾ ಪಠ್ಯಕ್ರಮಗಳಲ್ಲಿ ಬಾಲ್ಯವಿವಾಹ ನಿಷೇಧ ಕಾನೂನು ಒಳಗೊಂಡಂತೆ ಲೈಂಗಿಕ ಶಿಕ್ಷಣ ಅಳವಡಿಸುವ ಕುರಿತು ಚರ್ಚಿಸಲಾಯಿತು. ಈ ಸಂಬಂಧ ಈ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಹಕಾರವನ್ನು ಪಡೆಯಲು ಅಧ್ಯಕ್ಷರು ಸೂಚಿಸಿದರು. (**ಕ್ರಮ**: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ)

17. **ಬಾಲಕಿಯರ ಮತ್ತು ಯುವತಿಯರ ಸಬಲೀಕರಣ ಕಾರ್ಯಕ್ರಮಗಳ ಕುರಿತು.**

ಈ ಕುರಿತಂತೆ ಸಭೆಯಲ್ಲಿ ಚರ್ಚಿಸಲಾಯಿತು. ಬಾಲಕಿಯರ ಮತ್ತು ಯುವತಿಯರ ಸಬಲೀಕರಣ ಕಾರ್ಯಕ್ರಮಗಳ ಕುರಿತಂತೆ ಈಗಾಗಲೇ ಪ್ರಾಯೋಗಿಕವಾಗಿ 5 ಜಿಲ್ಲೆಗಳ 11 ತಾಲ್ಲೂಕುಗಳಲ್ಲಿ ಸ್ಪೂರ್ತಿ ಕಾರ್ಯಕ್ರಮದಡಿ ಹದಿಹರೆಯದ ಹೆಣ್ಣು ಮಕ್ಕಳಿಗೆ ಬಾಲ್ಯವಿವಾಹ ಇತ್ಯಾದಿ ಸಾಮಾಜಿಕ ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸಿ ಕೌಶಲ್ಯಾಭಿವೃದ್ಧಿ ಮೂಲಕ ಸಬಲೀಕರಣ ಕಾರ್ಯಕ್ರಮಗಳನ್ನು KHPT ಸಂಸ್ಥೆಯ ಮೂಲಕ ಹಮ್ಮಿಕೊಳ್ಳಲಾಗಿದೆ ಎಂಬ ವಿಷಯವನ್ನು ಸಭೆಯ ಗಮನಕ್ಕೆ ತರಲಾಯಿತು. (**ಕ್ರಮ**: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ)

18. **ಸಹಾಯವಾಣಿಗಳ ಕುರಿತು ಜಾಗೃತಿ**

ಮಕ್ಕಳ ಸಹಾಯವಾಣಿ 1098 ಮತ್ತು ಮಹಿಳಾ ಸಹಾಯವಾಣಿ 181 ಕುರಿತಂತೆ ಹೆಚ್ಚಿನ ಜಾಗೃತಿ ಮೂಡಿಸುವ ಕುರಿತು ಚರ್ಚಿಸಲಾಯಿತು. ಈಗಾಗಲೇ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗಳು ಮಕ್ಕಳ ಸಹಾಯವಾಣಿ 1098 ಕುರಿತು ಜಾಗೃತಿಯನ್ನು ಶಾಲಾ ಕಾಲೇಜುಗಳಲ್ಲಿ, ಸಾರ್ವಜನಿಕ ಸ್ಥಳಗಳಲ್ಲಿ, ಮೆಟ್ರೋ ರೈಲುಗಳಲ್ಲಿ, ಸಾರ್ವಜನಿಕ ಸಾರಿಗೆಗಳಲ್ಲಿ, ಗೋಡೆ ಬರಹ ಮತ್ತು ಡಿಜಿಟಲ್ ಬ್ಯಾನರ್ಗಳ ಮೂಲಕ ಪ್ರಚುರ ಪಡಿಸಲಾಗಿರುತ್ತದೆ ಎಂಬ ಮಾಹಿತಿಯನ್ನು ಸಭೆಯ ಗಮನಕ್ಕೆ ತರಲಾಯಿತು. (**ಕ್ರಮ**: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗಳು ಮತ್ತು ಮಕ್ಕಳ ರಕ್ಷಣಾ ನಿರ್ದೇಶನಾಲಯ)

19. **ತರಬೇತಿ/ಸಾಮರ್ಥ್ಯಾಭಿವೃದ್ಧಿ:**

ಸಮುದಾಯ ಆರೋಗ್ಯ ಕಾರ್ಯಕರ್ತರು ಮತ್ತು ಆರೋಗ್ಯ ಶಿಕ್ಷಣ ಅಧಿಕಾರಿಗಳು, ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು, ನ್ಯಾಯಾಂಗದ ಅಧಿಕಾರಿಗಳು, ಶಾಲಾ ಶಿಕ್ಷಕರು ಮತ್ತು ಆಡಳಿತ ಮಂಡಳಿ, ಜನ ಪ್ರತಿನಿಧಿಗಳಿಗೆ ಸರ್ಕಾರೇತರ ಸಂಸ್ಥೆಗಳ ಸಹಭಾಗಿತ್ವದೊಂದಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. (**ಕ್ರಮ**: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಒಳಾಡಳಿತ ಇಲಾಖೆ, ನ್ಯಾಯಾಂಗ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ)

20. **ಶಿಕ್ಷಣ ಮತ್ತು ಸಾಮಾಜಿಕ ಬೆಂಬಲ:**

ಬಾಲ್ಯವಿವಾಹಕ್ಕೊಳಗಾಗಬಹುದಾದ ಅಪಾಯವನ್ನು ಹೊಂದಿರುವ ಬಾಲಕಿಯರಿಗೆ ಶಿಕ್ಷಣವನ್ನು ಮುಂದುವರೆಸಲು ವಿವಿಧ ಇಲಾಖೆಗಳಲ್ಲಿ ಇರುವ ವಿದ್ಯಾರ್ಥಿ ನಿಲಯಗಳು, ವಿದ್ಯಾರ್ಥಿ ವೇತನ, ಆರ್ಥಿಕ ಬೆಂಬಲ ಕಾರ್ಯಕ್ರಮ ಹಾಗೂ ಇತರೆ ಸೌಲಭ್ಯಗಳ ಕುರಿತು

ಸಮಗ್ರ ಮಾಹಿತಿ ಕ್ರೋಢೀಕರಿಸಲು ತಿಳಿಸಲಾಯಿತು. (**ಕ್ರಮ**: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಮಕ್ಕಳ ರಕ್ಷಣಾ ನಿರ್ದೇಶನಾಲಯ)

21. **ಕ್ರಮಬದ್ಧ ಕಾರ್ಯವಿಧಾನ ರಚಿಸುವ ಕುರಿತು:**

ಈಗಾಗಲೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಕ್ರಮಬದ್ಧ ಕಾರ್ಯ ವಿಧಾನವನ್ನು ರಚಿಸಲಾಗಿರುತ್ತದೆ. ಮುಂದುವರೆದು ಬಾಲ್ಯವಿವಾಹಗಳನ್ನು ತಡೆಗಟ್ಟುವುದಕ್ಕಾಗಿ ಭಾಗೀದಾರರುಗಳಿಗಾಗಿ NCPCR ವತಿಯಿಂದ ವಿಸ್ತೃತ ಕ್ರಮಬದ್ಧ ಕಾರ್ಯ ವಿಧಾನ ರಚನೆಯಾಗಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು.

22. **ಬಾಲ್ಯ ವಿವಾಹದ ಅಪಾಯದಲ್ಲಿರುವ ಬಾಲಕಿಯರಿಗೆ ವೈಯಕ್ತಿಕ ಪಾಲನಾ ಯೋಜನೆಯನ್ನು ತಯಾರಿಸುವ ಕುರಿತು.**

ಬಾಲ್ಯ ವಿವಾಹದ ಅಪಾಯದಲ್ಲಿರುವ ಬಾಲಕಿ / ಬಾಲಕಿಯರು ಶಿಕ್ಷಣ ಮುಂದುವರೆಸುವ, ಮಾನಸಿಕ ಬೆಂಬಲ ವ್ಯವಸ್ಥೆಗಳು, ಸಮುದಾಯ / ಕುಟುಂಬಕ್ಕೆ ಮರು ಸೇರ್ಪಡೆ ಇತ್ಯಾದಿ ಅವಳ ಮುಂದಿನ ಜೀವನದ ಕುರಿತು ವಿಸ್ತೃತ ವೈಯುಕ್ತಿಕ ಪಾಲನಾ ಯೋಜನೆಯನ್ನು ತಯಾರಿಸುವುದು, ಯೋಜನೆಯ ಪರಿಣಾಮಕಾರಿ ಅನುಷ್ಠಾನ, ಉಪಯುಕ್ತತೆಯ ಕುರಿತು ಪ್ರತಿ 3 ತಿಂಗಳಿಗೊಮ್ಮೆ ಅನುಸರಣೆ ಮಾಡುವುದು, ಅಗತ್ಯವಿದ್ದಲ್ಲಿ ಮಗುವು ಎದುರಿಸುತ್ತಿರುವ ಸವಾಲುಗಳಿಗೆ ಅನುಸಾರವಾಗಿ ಪರಿಷ್ಕರಿಸಿ ಮಗುವಿಗೆ ಅಗತ್ಯ ಬೆಂಬಲ ನೀಡಬೇಕಾಗಿರುತ್ತದೆ. ಬಾಲ್ಯ ವಿವಾಹದ ಅಪಾಯದಲ್ಲಿರುವ ಮಕ್ಕಳ ವೈಯುಕ್ತಿಕ ಪಾಲನಾ ಯೋಜನೆ ತಯಾರಿಸುವ ಕುರಿತು ENFOLD ಸಂಸ್ಥೆಯ ನೆರವು ಪಡೆಯಬಹುದು ಎಂದು ಸಭೆಯಲ್ಲಿ ಚರ್ಚಿಸಲಾಯಿತು. (**ಕ್ರಮ**: ಮಕ್ಕಳ ರಕ್ಷಣಾ ನಿರ್ದೇಶನಾಲಯ)

23. **ಬಾಲ ನ್ಯಾಯ ನಿಧಿ ಸಾಂಸ್ಥೀಕರಣ ಕುರಿತು:**

ಬಾಲ್ಯ ವಿವಾಹದ ಅಪಾಯದಲ್ಲಿರುವ, ಬಾಲ್ಯ ವಿವಾಹ ರದ್ದುಪಡಿಸಲಾದ ಮಕ್ಕಳಿಗೆ ಬಾಲ ನ್ಯಾಯ ನಿಧಿಯಡಿ ಶಿಕ್ಷಣ ಮುಂದುವರೆಸಲು ಆರ್ಥಿಕ ಬೆಂಬಲ ಒದಗಿಸಲು ನಿರ್ದೇಶನವಿರುವ ಕುರಿತು ಚರ್ಚಿಸಲಾಯಿತು ಮತ್ತು ಬಾಲ್ಯ ವಿವಾಹ ರದ್ದುಗೊಂಡು ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಆಶ್ರಯ ಪಡೆದಿರುವ ಮಕ್ಕಳಿಗೆ ಶಿಕ್ಷಣ ಮುಂದುವರೆಸಲು ಕ್ರಮವಹಿಸುತ್ತಿರುವ ಬಗ್ಗೆ ಹಾಗೂ ಪೋಷಕರ ವಶಕ್ಕೆ ಬಿಡುಗಡೆಗೊಂಡ ಇಂತಹ ಮಕ್ಕಳಿಗೆ ಶಿಕ್ಷಣ ಮುಂದುವರೆಸಲು ಪ್ರಾಯೋಜಕತ್ವ ಕಾರ್ಯಕ್ರಮದ ಮೂಲಕ ಆರ್ಥಿಕ ಬೆಂಬಲ ಒದಗಿಸಲಾಗುತ್ತಿರುವ ಕುರಿತು ಸಭೆಯ ಗಮನಕ್ಕೆ ತರಲಾಯಿತು.

24. ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಪ್ರಕರಣ ಸಂಖ್ಯೆ WP (C) No.1234 of 2017 ರಲ್ಲಿನ ಬಾಲ್ಯ ವಿವಾಹ ತಡೆಗಟ್ಟುವಲ್ಲಿ ವಿವಿಧ ಭಾಗೀದಾರ ಇಲಾಖೆಗಳು ಮತ್ತು ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನೀಡಿದ ನಿರ್ದೇಶನಗಳ ಅನುಷ್ಠಾನದ ಕುರಿತು ಅನುಪಾಲನಾ ವರದಿಯನ್ನು ಪಡೆದು ಮುಂದಿನ ಸಭೆಯಲ್ಲಿ ಮಂಡಿಸಲು ಅಧ್ಯಕ್ಷರು ಸೂಚಿಸಿದರು.

ದಿನಾಂಕ 21.4.2025ರಂದು ಬಾಲ್ಯವಿವಾಹ ತಡೆಯುವ ಸಮನ್ವಯ ಸಮಿತಿಯ ಮುಂದಿನ ಸಭೆಯನ್ನು ಕರೆಯಲು ಹಾಗೂ ಪ್ರಸ್ತುತ ಸಭೆಗೆ ಈ ನಡವಳಿಯ ಪ್ರಕಾರ ತೆಗೆದುಕೊಂಡ ಕ್ರಮಗಳ ಅನುಸರಣಾ ವರದಿ, ಅಗತ್ಯ ದತ್ತಾಂಶಗಳು ಮತ್ತು ಮಾಹಿತಿಯೊಂದಿಗೆ ಹಾಜರಾಗುವಂತೆ ಸೂಚಿಸಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**(ಉಮಾ ಮಹಾದೇವನ್)**
ಅಪರ ಮುಖ್ಯ ಕಾರ್ಯದರ್ಶಿ ಹಾಗೂ
ಅಭಿವೃದ್ಧಿ ಆಯುಕ್ತರು ಹಾಗೂ
ಅಧ್ಯಕ್ಷರು,
ಬಾಲ್ಯವಿವಾಹಗಗಳನ್ನು ತಡೆಯುವ ರಾಜ್ಯಮಟ್ಟದ
ಸಮನ್ವಯ ಮತ್ತು ಪರಿಶೀಲನಾ ಸಮಿತಿ